# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾವಿ: 2025-26 / ೬೪೦ ದಿನಾಂಕ:21.06.2025

## : ಸುತ್ತೋಲೆ :

ವಿಷಯ: ಜಿಲ್ಲಾಡಳಿತದಿಂದ ದಿ:27.06.2025 ರಂದು "ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ" ಪ್ರಯುಕ್ತ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವ ಕುರಿತು.

ಉಲ್ಲೇಖ: ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ॥ ಗುಬ್ಬಿ ವೀರಣ್ಣ ಕಲಾಕ್ಷೇತ್ರ, ತುಮಕೂರು ಇವರ ಪತ್ರ ದಿನಾಂಕ:20.06.2025

* * * * *

ಮೇಲ್ಕಂಡ ವಿಷಯ ಹಾಗೂ ಉಲೇಖ ಪತ್ರಕ್ಕೆ ಸಂಬಂಧಿಸಿದಂತೆ, ಸರ್ಕಾರದ ಸೂಚನೆಯಂತೆ ಜಿಲ್ಲಾಡಳಿತ, ತುಮಕೂರು ವತಿಯಿಂದ **"ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ"** ಕಾರ್ಯಕ್ರಮವನ್ನು **ದಿನಾಂಕ:27.06.2025ರಂದು ಬೆಳಿಗ್ಗೆ:10.30 ಗಂಟೆಗೆ ಡಾ॥ ಗುಬ್ಬಿ ವೀರಣ್ಣ ಕಲಾಕ್ಷೇತ್ರ, ತುಮಕೂರು** ಇಲ್ಲಿ ಆಚರಿಸಲಾಗುತ್ತದೆ. ಈ ಸಂಬಂಧ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು, ಘಟಕ ಕಾಲೇಜುಗಳು ಮತ್ತು ಸ್ನಾತಕೋತ್ತರ ವಿಭಾಗಗಳ ಆಸಕ್ತ ವಿದ್ಯಾರ್ಥಿಗಳು ಆಯೋಜಿಸಿರುವ ಸ್ಪರ್ಧೆಗಳಿಗೆ ಸಂಬಂಧಿಸಿದಂತೆ ಮಾಹಿತಿಯೊಂದಿಗೆ ಸಂಯೋಜಕರು, ಶ್ರೀ. ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು ಇವರಿಗೆ ಸಂಪರ್ಕಿಸುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

**ಸಂಪರ್ಕಿಸಬೇಕಾದ ವಿವರ:**

ಡಾ॥ ಸುರೇಶ .ಡಿ,
ಸಂಯೋಜಕರು, ಶ್ರೀ. ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
ದೂರವಾಣಿ ಸಂಖ್ಯೆ:9886465964
ಇ-ಮೆಲ್ ವಿಳಾಸ–pbdsuresh@gmail.com

ಆದೇಶದ ಮೇರೆಗೆ

ಉಪಕುಲಸಚಿವರು
ಉಪಕುಲಸಚಿವರು
ಖರೀದಿ ಕೋಶ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:-

1. ಸಂಯೋಜಕರು, ಶ್ರೀ. ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ಸ್ನಾತಕ/ಸ್ನಾತಕೋತ್ತರ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಅಧ್ಯಕ್ಷರು/ ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತು.ವಿ.ತು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು : ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು
5. ಮಾನ್ಯ ಕುಲಪತಿಗಳ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಕಚೇರಿ ಪ್ರತಿ

ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
ಸಹಾಯಕ ನಿರ್ದೇಶಕರ ಕಛೇರಿ, ಡಾ:ಗುಬ್ಬಿ ವೀರಣ್ಣ ಕಲಾಕ್ಷೇತ್ರ, ತುಮಕೂರು

Email – dkc.tumakuru@gmail.com adkc.tumkur@gmail.com ದೂ : 0816-2275204

ಕ್ರ:ಕಸಂತು:19:ಕೆಂ.ಗೌ.ಜ.ಆ:2025-26

ದಿನಾಂಕ:20-06-2025

ಗೆ,
ಮಾನ್ಯ ರಿಜಿಸ್ಟ್ರಾರ್
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಮಾನ್ಯರೇ,

ವಿಷಯ : ಜಿಲ್ಲಾಡಳಿತದಿಂದ ಏರ್ಪಡಿಸಲಾಗಿರುವ "ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ" ಕಾರ್ಯಕ್ರಮದ ಅಂಗವಾಗಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವ ಕುರಿತು.

ಉಲ್ಲೇಖ: ದಿ: 20-06-2025ರಂದು ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯಂತೆ

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಸೂಚನೆಯಂತೆ ಜಿಲ್ಲಾಡಳಿತ, ತುಮಕೂರು - ವತಿಯಿಂದ "ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ" ಕಾರ್ಯಕ್ರಮವನ್ನು ದಿ:27-06-2025ರಂದು ಬೆಳಿಗ್ಗೆ : 10-30ಗಂಟೆಗೆ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರ, ತುಮಕೂರು ಇಲ್ಲಿ ಆಚರಿಸಲಾಗುತ್ತಿದೆ.

ಈ ಸಂಬಂಧ ಉಲ್ಲೇಖದನ್ವಯ ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರ ಸಭೆಯ ಸೂಚನೆಯಂತೆ, ನಾಡಪ್ರಭು ಕೆಂಪೇಗೌಡರ ಸಾಧನೆ ಕುರಿತಂತೆ,

1) ರಸಪ್ರಶ್ನೆ / ಪ್ರಬಂಧ ಸ್ಪರ್ಧೆ/ ಆಶುಭಾಷಣ ಸ್ಪರ್ಧೆ / ಕವನ ವಾಚನ / ಗಾಯನ / ಚಿತ್ರಕಲೆ - ಇದರಲ್ಲಿ ಯಾವುದಾದರೂ ಒಂದು ಪ್ರಕಾರದಡಿ ತಮ್ಮ ವ್ಯಾಪ್ತಿಯ ಪದವಿ ಕಾಲೇಜು ವ್ಯಾಪ್ತಿಯಲ್ಲಿ ಕಾಲೇಜು ಮಕ್ಕಳಲ್ಲಿ ಸ್ಪರ್ಧೆಯನ್ನು ನಡೆಸುವುದು.
2) ಅದರಲ್ಲಿ ಆಯ್ಕೆಯಾಗುವ ಐದು ವಿದ್ಯಾರ್ಥಿಗಳ ಹೆಸರನ್ನು ದಿ:24-06-2025ರ ಒಳಗಾಗಿ ಈ ಕಚೇರಿಗೆ ಕಳುಹಿಸಿಕೊಡಲು ತಮ್ಮನ್ನು ವಿನಂತಿಸುತ್ತೇನೆ. ( ಯಾವುದಾದರೂ ಒಂದು ಪ್ರಕಾರದ ಸ್ಪರ್ಧೆಯನ್ನು ನಡೆಸಿ ಅದರಲ್ಲಿ ಐದು ವಿದ್ಯಾರ್ಥಿಗಳ ಪಟ್ಟಿಯನ್ನು ಮಾತ್ರ ಕಳುಹಿಸಬೇಕು)
3) ಆಯ್ಕೆಯಾಗುವ ಮಕ್ಕಳಿಗೆ ಪುಸ್ತಕ ರೂಪದಲ್ಲಿಬಹುಮಾನ ಹಾಗೂ ಪ್ರಮಾಣಪತ್ರವನ್ನು ಜಿಲ್ಲಾಡಳಿತದಿಂದ ನೀಡಲಾಗುವುದು.
4) ಸ್ಪರ್ಧೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಭಾಗವಹಿಸಬೇಕು.
5) ಸ್ಪರ್ಧೆಯಲ್ಲಿ ಎಲ್ಲಾ ಸಮುದಾಯದ ವಿದ್ಯಾರ್ಥಿಗಳಿಗೆ ಅವಕಾಶವಿರುತ್ತದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

21/06/25

ಸಹಾಯಕ ನಿರ್ದೇಶಕರು
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಡಾ|| ಗುಬ್ಬಿ ವೀರಣ್ಣ ಕಲಾಕ್ಷೇತ್ರ
ತುಮಕೂರು.